ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

39

ಇಲಾಖೆ / ವಿಷಯ : DEPARTMENT / SUBJECT: ಕೃಷಿ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 23/3/2021

## ವಿಧಾನಸೌಧ ಚಲೋ ಯತ್ನ। ಫ್ರೀಡಂಪಾರ್ಕ್‌ನಲ್ಲಿ ಸಮಾವೇಶಗೊಂಡು ರೈತರ ಶಕ್ತಿ ಪ್ರದರ್ಶನ

# ಮಾರ್ಚ್ 26ಕ್ಕೆ ಭಾರತ್ ಬಂದ್‌ಗೆ ಕರೆ

ವಿಕ ಸುದ್ದಿಲೋಕ ಬೆಂಗಳೂರು

ರೈತರಿಗೆ ಮಾರಕವಾಗಿರುವ ಕೃಷಿ ಕಾಯಿದೆಗಳನ್ನು ವಾಪಸ್ ಪಡೆಯುವಂತೆ ಒತ್ತಾಯಿಸಿ ಸೋಮವಾರ 'ವಿಧಾನಸೌಧ ಚಲೋ' ನಡೆಸಿದ ರೈತರು, ಮಾರ್ಚ್ 26ರಂದು 'ಭಾರತ್ ಬಂದ್'ಗೆ ಕರೆ ನೀಡಿದರು.

ನಗರದ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಿಂದ ರ್‍ಯಾಲಿ ಮೂಲಕ ವಿಧಾನ ಸೌಧಕ್ಕೆ ಮುತ್ತಿಗೆ ಹಾಕಲು ಹೊರಟಿದ್ದ ರೈತರನ್ನು ಪೊಲೀಸರು ಫ್ರೀಡಂ ಪಾರ್ಕ್ ಬಳಿ ತಡೆದರು. ಈ ವೇಳೆ ರೈತ ನಾಯಕರು ಮತ್ತು ಪೊಲೀಸರ ನಡುವೆ ಮಾತಿನ ಚಕಮಕಿ ನಡೆಯಿತು. ಪೊಲೀಸರ ಮನವಿ ಮೇರೆಗೆ ಫ್ರೀಡಂಪಾರ್ಕ್‌ನಲ್ಲಿ ಸಮಾವೇಶಗೊಂಡು ಶಕ್ತಿ ಪ್ರದರ್ಶನ ನಡೆಸಿದರು.

ಇದೇ ವೇಳೆ ಮಾತನಾಡಿದ ರೈತ ನಾಯಕ ರಾಕೇಶ್ ಟಿಕಾಯತ್, ''ಮಾರಕ ಮೂರು ಕೃಷಿ ಕಾಯಿದೆಗಳನ್ನು ವಿರೋಧಿಸಿ ಹಾಗೂ ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಕಾನೂನಿನ ಮಾನ್ಯತೆ ನೀಡುವಂತೆ ಒತ್ತಾಯಿಸಿ ರಾಷ್ಟ್ರದ ರಾಜಧಾನಿ ದಿಲ್ಲಿಯನ್ನು ನಾಲ್ಕು ದಿಕ್ಕುಗಳಿಂದ ರೈತರು ಸುತ್ತುವರೆದಿದ್ದಾರೆ. ಕೇಂದ್ರ ಸರಕಾರದೊಂದಿಗೆ ಇದುವರೆಗೆ 12 ಸುತ್ತಿನ ಮಾತುಕತೆಗಳು ನಡೆದಿವೆ. ಬಂಡವಾಳ ಶಾಹಿಗಳ ಪರವಾದ ಕೇಂದ್ರ ಸರಕಾರ ಎರಡು ತಿಂಗಳಿಂದ ಮಾತುಕತೆಯನ್ನು ಸ್ಥಗಿತಗೊಳಿಸಿದೆ,'' ಎಂದು ಆಕ್ರೋಶ ವ್ಯಕ್ತಪಡಿಸಿದರು.

''ಕೇಂದ್ರ ಸರಕಾರ ರೈಲ್ವೆ, ಏರ್‌ಪೋರ್ಟ್, ದೊಡ್ಡ ತೈಲ ಕಂಪನಿಗಳು, ಎಲ್‌ಐಸಿಯಂತಹ ದೊಡ್ಡ ಸಾರ್ವಜನಿಕ ಸಂಸ್ಥೆಗಳನ್ನು ಮಾರಾಟ ಮಾಡುತ್ತಿದೆ. ಜನರನ್ನು ಜಾತಿ, ಧರ್ಮದ ಹೆಸರಿನಲ್ಲಿ ಹೊಡೆದಾಡಲು ಪ್ರಚೋದಿಸುತ್ತಿದೆ. ಸರಕಾರದ ಜನವಿರೋಧಿ ನೀತಿ ಗಳನ್ನು ಪ್ರಶ್ನಿಸುವವರನ್ನು ದೇಶದ್ರೋಹಿಗಳೆಂದು ಬಿಂಬಿಸಲು ಯತ್ನಿಸುತ್ತಿದೆ. ಜನ ಈಗ ಎಚ್ಚೆತ್ತುಕೊಂಡಿದ್ದು, ನಮ್ಮ ಹೋರಾಟಕ್ಕೆ ವ್ಯಾಪಕ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಇದು 2ನೇ ಸ್ವಾತಂತ್ರ್ಯ ಹೋರಾಟವಾಗಿದ್ದು, ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ,'' ಎಂದರು.

''ಭೂಮಿ ಮತ್ತು ಆಹಾರದ ವ್ಯಾಪಾರಕ್ಕೆ ದೊಡ್ಡ ಬಂಡವಾಳಶಾಹಿಗಳು ಕಾದು ಕುಳಿತಿದ್ದಾರೆ. ಆ ಮೂಲಕ ಹಸಿವಿನ ವ್ಯಾಪಾರಕ್ಕಿಳಿದಿದ್ದಾರೆ. ಇಂತಹ ಜನವಿರೋಧಿ ನೀತಿಗಳ ವಿರುದ್ಧ ಸದನದ ಒಳಗೆ ವಿಪಕ್ಷಗಳ ದನಿ ಕ್ಷೀಣಿಸುತ್ತಿರುವಾಗ ನಾವು ದೇಶದ ಎಲ್ಲಾ ಮೂಲೆಗಳಲ್ಲಿ ರೈತರ ಆಂದೋಲನ ಹುಟ್ಟುಹಾಕಬೇಕಿದೆ,'' ಎಂದರು.

''ಫಸಲು ಮಾರಲು ಎಪಿಎಂಸಿ ಅಗತ್ಯವಿಲ್ಲ, ಹೊಸ ಕಾಯಿದೆಗಳ ಅನ್ವಯ ಎಲ್ಲಿ ಬೇಕಾದರೂ ರೈತರು ಬೆಳೆಯನ್ನು ಮಾರಬಹುದು ಎಂದು ಸರಕಾರ ಹೇಳುತ್ತಿದೆ. ಹಾಗಾಗಿ ರೈತರು ಬೆಳೆಯನ್ನು ವಿಧಾನಸೌಧಕ್ಕೆ ತಂದು ಮಾರಬೇಕು. ಯಾರಾದರೂ ತಡೆದರೆ ಪ್ರಶ್ನಿಸಬೇಕು. ಬೀಜ ಕಾಯಿದೆ ತಂದು ರೈತರ ಸ್ವಾಯತ್ತತೆ ಕಸಿದುಕೊಳ್ಳಲಾಗುತ್ತಿದೆ. ವಿದ್ಯುತ್ ತಿದ್ದುಪಡಿ ಕಾಯಿದೆಯ ಮೂಲಕ ಸಮರ್ಪಕ ವಿದ್ಯುತ್ ನೀಡದೆ ದುಪ್ಪಟ್ಟು ಹಣ ವಸೂಲಿ ಮಾಡಲಾಗುತ್ತದೆ. ಇದೆಲ್ಲವೂ ಬಂಡವಾಳ ಶಾಹಿಗಳು ಕೃಷಿಯನ್ನು ವಶಪಡಿಸಿಕೊಳ್ಳಲು ಮಾಡುತ್ತಿರುವ ಹುನ್ನಾರ,'' ಎಂದು ಆರೋಪಿಸಿದರು.

**ರೈತರ ವಿರುದ್ಧವೇ ಸಮರ:** ಭಾರತೀಯ ಕಿಸಾನ್ ಯೂನಿಯನ್ ರಾಷ್ಟ್ರೀಯ ಕಾರ್ಯದರ್ಶಿ ಯದುವೀರ್ ಸಿಂಗ್, ''ರೈತರ ಆದಾಯ ಡಬಲ್ ಮಾಡುವುದಾಗಿ ಹೇಳಿದ್ದ ಮೋದಿ ಸರಕಾರ ಈಗ ರೈತರ ವಿರುದ್ಧವೇ ಸಮರ ಸಾರಿದೆ. ಆದ್ದರಿಂದ ದೆಹಲಿ ಮಾದರಿಯಲ್ಲಿ ರೈತರು ಬೆಂಗಳೂರು ಸುತ್ತುವರಿದು ತಕ್ಕ ಪಾಠ ಕಲಿಸಬೇಕು,'' ಎಂದರು.

ಚಿತ್ರನಟ ಚೇತನ್ ಮಾತನಾಡಿ, ''ರೈತ ವಿರೋಧಿ ಕಾನೂನುಗಳ ವಿರುದ್ಧ ಪ್ರತಿಭಟಿಸುತ್ತಿರುವವರನ್ನು ಭಯೋತ್ಪಾದಕರು ಎಂದು ಕರೆಯಲಾಗುತ್ತಿದೆ. ಆದರೆ, ರೈತರ ವಿರುದ್ಧ ಜಲ ಫಿರಂಗಿ ಬಳಸುವ, ರಸ್ತೆಗೆ ಮೊಳೆ ಜಡಿಯುವ ಕೇಂದ್ರ ಸರಕಾರ ನಿಜವಾಗಿ ಭಯೋತ್ಪಾದನೆ ಮಾಡುತ್ತಿದೆ,'' ಎಂದು ಆಕ್ಷೇಪ ವ್ಯಕ್ತಪಡಿಸಿದರು.

ನಂತರ ರಾಜ್ಯ ಸರಕಾರದ ಪರವಾಗಿ ಕೃಷಿ ಸಚಿವ ಬಿ.ಸಿ. ಪಾಟೀಲ್ ಮನವಿ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ನಾನಾ ರೈತ, ದಲಿತ ಮತ್ತು ಕಾರ್ಮಿಕ ಸಂಘಟನೆಗಳ ಮುಖಂಡರಾದ ಡಾ.ದರ್ಶನ್ ಪಾಲ್, ಯಧುವೀರ್‌ಸಿಂಗ್, ಕುಲ್‌ಬೀರ್‌ಸಿಂಗ್, ಎಸ್.ಆರ್.ಪಾಟೀಲ್, ಬಡಗಲಪುರ ನಾಗೇಂದ್ರ, ಚುಕ್ಕಿ ನಂಜುಂಡಸ್ವಾಮಿ, ಕೋಡಿಹಳ್ಳಿ ಚಂದ್ರಶೇಖರ್ ಮುಂತಾದ ಮುಖಂಡರು ಪಾಲ್ಗೊಂಡಿದ್ದರು.



ಬೆಂಗಳೂರಿನಲ್ಲಿ ಸೋಮವಾರ ನಡೆದ ರೈತರ 'ವಿಧಾನಸೌಧ ಚಲೋ' ರ್‍ಯಾಲಿಗೆ ರೈತ ಮುಖಂಡ ರಾಕೇಶ್ ಟಿಕಾಯತ್ ಚಾಲನೆ ನೀಡಿದರು.

ದಿಲ್ಲಿಯ ಮೂರು ಗಡಿಗಳಲ್ಲಿ ಏಪ್ರಿಲ್‌ನಲ್ಲಿ ನಿರ್ಮಾಣವಾಗಲಿರುವ ರೈತ ಸ್ಮಾರಕಗಳಿಗೆ ಕರ್ನಾಟಕದ ಮಣ್ಣು ತೆಗೆದುಕೊಂಡು ಹೋಗಲು ತೀರ್ಮಾನಿಸಲಾಗಿದೆ. ರೈತರ ಮುಷ್ಕರವನ್ನು ಬೆಂಬಲಿಸಿ ಮಾ.5 ರಿಂದ ಬಸವ ಕಲ್ಯಾಣದಿಂದ ಆರಂಭವಾಗಿರುವ ರೈತರ ಪಾದಯಾತ್ರೆಯು ಮಾ.23ರಂದು ಬಳ್ಳಾರಿಯಲ್ಲಿ ಸಮಾರೋಪಗೊಳ್ಳಲಿದೆ. ಮಾರ್ಗ ಮಧ್ಯೆ 26 ಗ್ರಾಮಗಳಿಂದ ಮಣ್ಣನ್ನು ಸಂಗ್ರಹಿಸಲಾಗಿದೆ ಎಂದು ರೈತ ಮುಖಂಡರು ತಿಳಿಸಿದರು.